ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 13/10/2017

# ಐಟಿ ದಾಳಿ ರಾಜಕೀಯ ಪ್ರೇರಿತ ಅಲ್ಲ: ಪರಂ

## ತೆರಿಗೆ ಅಧಿಕಾರಿಗಳ ಎಲ್ಲ ಪ್ರಶ್ನೆಗೆ ನಾನು, ಆನಂದ್ ಉತ್ತರಿಸುತ್ತೇವೆ: ಮಾಜಿ ಡಿಸಿಎಂ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 13/10/17

ಆದಾಯ ತೆರಿಗೆ ದಾಳಿಗೆ ನಾನು ರಾಜಕೀಯ ಬಣ್ಣ ಕಟ್ಟುವುದಿಲ್ಲ. ಐಟಿ ವಿಚಾರಣೆಗೆ ಸಹಕಾರ ನೀಡುತ್ತೇನೆ. ಅವರು ಸಂಗ್ರಹಿಸಿರುವ ದಾಖಲೆಗಳಿಗೆ ಸಮರ್ಪಕ ಸ್ಪಷ್ಟನೆ ನೀಡುತ್ತೇನೆ. ಮಂಗಳವಾರ ವಿಚಾರಣೆಗೆ ಕರೆದಿದ್ದು, ಅದಕ್ಕೆ ಹಾಜರಾಗುತ್ತೇನೆ.

ಹೀಗೆಂತ ಹೇಳುವ ಮೂಲಕ ಮಾಜಿ ಕೆಪಿಸಿಸಿ ಅಧ್ಯಕ್ಷ ಡಾ.ಜಿ. ಪರಮೇಶ್ವರ್ ಅವರು ಐಟಿ ದಾಳಿ ರಾಜಕೀಯ ಪ್ರೇರಿತ ಎಂಬ ಕಾಂಗ್ರೆಸ್ ಪಕ್ಷ ನಿಲುವಿನಿಂದ ಅಂತರ ಕಾಯ್ದುಕೊಂಡಿದ್ದಾರೆ.

ಐಟಿ ದಾಳಿ ಕುರಿತು ಶನಿವಾರ ತಮ್ಮನ್ನು ಭೇಟಿ ಮಾಡಿದ ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ಕಾಲೇಜು ವಿದ್ಯಾರ್ಥಿಗಳ ದೂರಿನ ಅನ್ವಯ ದಾಳಿ ನಡೆಸಿರುವುದಾಗಿ ಐಟಿ ಅಧಿಕಾರಿಗಳು ತಿಳಿಸಿದ್ದಾರೆ. ಸಿದ್ಧಾರ್ಥ್ ಕಾಲೇಜಿನ ಉಸ್ತುವಾರಿಯನ್ನು ಸಹೋದರನ ಮಗ ಆನಂದ್ ನೋಡಿಕೊಳ್ಳುತ್ತಿದ್ದಾನೆ. ಆತನೂ ಬುದ್ಧಿವಂತನಿದ್ದು, ಕಾಲೇಜಿಗೆ ಸಂಬಂಧಿಸಿದ ಎಲ್ಲ ಪ್ರಶ್ನೆಗಳಿಗೂ ಉತ್ತರಿಸುತ್ತಾನೆ. ಹೀಗಾಗಿ, ನಾನು ಈ ದಾಳಿ ರಾಜಕೀಯ ಪ್ರೇರಿತ ಎಂಬ ಬಣ್ಣ ಕಟ್ಟಲು ಬಯಸುವುದಿಲ್ಲ ಎಂದರು.

ಕಳೆದ 30 ವರ್ಷಗಳಿಂದ ಸಿದ್ಧಾರ್ಥ ಶಿಕ್ಷಣ ಸಂಸ್ಥೆಯ ಆಡಳಿತ ವಿಚಾರದಲ್ಲಿ ಭಾಗಿಯಾಗಿರಲಿಲ್ಲ. ನಮ್ಮ ಸಹೋದರ ಮೃತಪಟ್ಟ ನಂತರ ಸಂಸ್ಥೆಯ ಜವಾಬ್ದಾರಿ ವಹಿಸಿಕೊಂಡಿದ್ದೇನೆ. ಐಟಿ ಅಧಿಕಾರಿಗಳು ಕೇಳಿದ ಎಲ್ಲ ಪ್ರಶ್ನೆಗಳಿಗೂ ಉತ್ತರಿಸಿದ್ದೇನೆ. ಅಧಿಕಾರಿಗಳ ಸೂಚಿಸಿದಂತೆ ಮಂಗಳವಾರ ವಿಚಾರಣೆಗೆ ಹಾಜರಾಗುವುದಾಗಿ ತಿಳಿಸಿದರು. ವೈದ್ಯಕೀಯ ಸೀಟ್ ಬ್ಲಾಕ್ ಮಾಡುವಲ್ಲಿ ಅಕ್ರಮ ನಡೆದಿದೆ ಎಂದು ಐಟಿ ಅಧಿಕಾರಿಗಳು ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ ಎಂಬುದರ ಕುರಿತು ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಈ ಎಲ್ಲ ಅಂಶಗಳನ್ನು ಐಟಿ ಅಧಿಕಾರಿ ಗಳು ಪರಿಶೀಲನೆ ನಡೆಸಲಿ ಎಂದರು. ಅ.10ರ ಬೆಳಗ್ಗೆ ಐಟಿ ಅಧಿಕಾರಿಗಳು ಬಂದಿದ್ದಾಗ ತಾವು ಕ್ಷೇತ್ರದಲ್ಲಿ ಕೆರೆಯೊಂದಕ್ಕೆ ಗಂಗಾ ಪೂಜೆ ನೆರವೇರಿಸಲು ತೆರಳಿದ್ದೆ ಎಂದರು.

### ನನ್ನ ಮನೆಯಲ್ಲಿ 400 ಕೋಟಿ ಸಿಕ್ಕಿಲ್ಲ



ದಾಳಿಯ ಮೊದಲ ದಿನ ನಮ್ಮ ಮನೆ ಸಂಪೂರ್ಣ ಪರಿಶೀಲನೆ ನಡೆಸಿದರು. ದಾಳಿ ನಡೆಸಿರುವ ಸಂಬಂಧ ನನ್ನಿಂದ ಪಂಚನಾಮೆಗೆ ಐಟಿ ಅಧಿಕಾರಿಗಳು ಸಹಿ ಪಡೆದಿದ್ದಾರೆ. ಮನೆಯಲ್ಲಿ ₹400 ಕೋಟಿ ದೊರಕಿದೆ ಎಂದೆಲ್ಲ ಮಾಧ್ಯಮಗಳು ವರದಿ ಮಾಡಿವೆ. ಅಷ್ಟು ಹಣ ಸಂಗ್ರಹ ಅಸಾಧ್ಯ. ಇದೆಲ್ಲ ವದಂತಿ. ಈ ಬಗ್ಗೆ ಹಂತ ಹಂತವಾಗಿ ಮಾಹಿತಿ ಲಭ್ಯವಾಗಲಿದೆ ಎಂದು ಹೇಳಿದರು.